ನಗರ ಮತ್ತು ಗ್ರಾಮಾಂತರ ಯೋಜನಾ
ಜಂಟಿ ನಿರ್ದೇಶಕರ ಕಛೇರಿ
(ಬೆಂಗಳೂರು ವಿಭಾಗ)
ಬಹು ಮಹಡಿಗಳ ಕಟ್ಟಡ, ಗೇಟ್-4,
ಪಿ ಬಿ ನಂ. 5257
ಡಾ. ಬಿ. ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು - 560001.

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರ ವಿಭಾಗೀಯ ಕಚೇರಿ,**
ಬಹು ಮಹಡಿಗಳ ಕಟ್ಟಡ, 4ನೇ ಹಂತ, ಡಾ:ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು–560001
ದೂರವಾಣಿ ಸಂಖ್ಯೆ: 080–22353973 E-Mail ID – jdtpbangalore@gmail.com

---

ಸಂಖ್ಯೆ: ನಗ್ರಾಯೋ/ವಿಕಬೆಂ–02/ತಾಂ.ಶಾಖೆ/33/ವಿನ್ಯಾಸ/2020–21/1458 ದಿನಾಂಕ: 29 OCT 2020
*ನೋಂದಾಯಿತ ಅಂಚೆ/ಸ್ವೀಕೃತಿ ನಿರೀಕ್ಷೆ*

## "ತಾಂತ್ರಿಕ ಅನುಮೋದನೆ"

ವಿಷಯಃ ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕು, ಕಸಬಾ ಹೋಬಳಿ, ಜಿ.ಆರ್.ಹಳ್ಳಿ ಗ್ರಾಮದ ಸ.ನಂ. 92/7ಬಿ1 ರಲ್ಲಿ 02ಎಕರೆ–00ಗುಂಟೆ ವಿಸ್ತೀರ್ಣದ ವಾಣಿಜ್ಯ ಉದ್ದೇಶದ ಭೂ ಪರಿವರ್ತಿತ ಜಮೀನಿಗೆ ವಾಣಿಜ್ಯ (ಸಿಟಿ ಗ್ಯಾಸ್ ಡಿಸ್ಟ್ರಿಬ್ಯೂಷನ್ ಮತ್ತು ಸಿ.ಎನ್.ಜಿ. ಸ್ಟೋರೇಜ್ ಘಟಕ) ಉದ್ದೇಶಕ್ಕಾಗಿ ಏಕ ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖಃ
1. ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: LCCP101229/2020 ದಿನಾಂಕ. 18/09/2020.
2. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರ ಪತ್ರ ಸಂಖ್ಯೆ: ನಗ್ರಾಯೋಚಿ/ಚಿ.ತಾ.ಜಿ.ಆರ್.ಹ./ಕೈ.ಏ.ವಿ/2018–19/584 ದಿ: 19/12/2018.
3. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿ.ಆರ್.ಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯ, ಚಿತ್ರದುರ್ಗ ತಾಲ್ಲೂಕು ಇವರ ಪತ್ರ ಸಂಖ್ಯೆ: ಗ್ರಾ.ಪಂ.ಜಿ.ಆರ್/5/2020/21 ದಿನಾಂಕ: 28/08/2020.
4. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರ ಪತ್ರ ಸಂಖ್ಯೆ: ನಗ್ರಾಯೋಚಿ/ಚಿ.ತಾ.ಜಿ.ಆರ್.ಹ./ವಾ.ಏ.ನಿ.ವಿನ್ಯಾಸ/ಸಿಆರ್/2020–21/585 ದಿನಾಂಕ: 23/10/2020.
5. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಕೈಪಿಡಿ ಸಂಖ್ಯೆ: ಗ್ರಾಅಪ/86/ಗ್ರಾಪಂಅ/2014 ದಿನಾಂಕ:11/11/2014.

*****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಅಧಿಕೃತ ಜ್ಞಾಪನ ಪತ್ರದನ್ವಯ ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರು ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕು, ಕಸಬಾ ಹೋಬಳಿ, ಜಿ.ಆರ್.ಹಳ್ಳಿ ಗ್ರಾಮದ ಸ.ನಂ. 92/7ಬಿ1 ರಲ್ಲಿ 02ಎಕರೆ–00ಗುಂಟೆ ವಿಸ್ತೀರ್ಣದ ಕೈಗಾರಿಕೆ ಉದ್ದೇಶಕ್ಕೆ ಭೂ ಪರಿವರ್ತಿತ ಜಮೀನಿಗೆ ಉದ್ದೇಶ ಬದಲಾವಣೆ ಮಾಡಿ ವಾಣಿಜ್ಯ ಉದ್ದೇಶಕ್ಕಾಗಿ ಭೂ ಪರಿವರ್ತಿಸಿ ಆದೇಶ ಹೊರಡಿಸಿರುತ್ತಾರೆ. ಉಲ್ಲೇಖ (2) ರಲ್ಲಿ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರು ಸದರಿ ಜಮೀನಿಗೆ ಈ ಹಿಂದೆ ಕೈಗಾರಿಕೆ ಉದ್ದೇಶಕ್ಕೆ ಭೂ ಪರಿವರ್ತನೆಯಾಗಿದ್ದು, ಅದರಂತೆ, ಕೈಗಾರಿಕೆ ಉದ್ದೇಶಕ್ಕೆ ಏಕ ನಿವೇಶನ ವಿನ್ಯಾಸ ನಕ್ಷೆಯನ್ನು ಅನುಮೋದಿಸಿರುತ್ತಾರೆ. ಪ್ರಸ್ತುತ ಸದರಿ ಜಮೀನು ವಾಣಿಜ್ಯ ಉದ್ದೇಶಕ್ಕೆ ಭೂ ಪರಿವರ್ತನೆಯಾಗಿದ್ದು, ಸದರಿ ಜಮೀನಿಗೆ ವಾಣಿಜ್ಯ ವಿನ್ಯಾಸ ನಕ್ಷೆ ಅನುಮೋದಿಸಿಕೊಡಲು ಜಿ.ಆರ್.ಹಳ್ಳಿ ಗ್ರಾಮ ಪಂಚಾಯಿತಿಯನ್ನು ಅರ್ಜಿದಾರರು ಕೋರಿದ್ದು, ಅದರನ್ವಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿ.ಆರ್.ಹಳ್ಳಿ ಗ್ರಾಮ ಪಂಚಾಯಿತಿ ಇವರು ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರನ್ನು ಉಲ್ಲೇಖ (3) ರಲ್ಲಿ ವಾಣಿಜ್ಯ ಉದ್ದೇಶನದ ಏಕ ನಿವೇಶನ ವಿನ್ಯಾಸ ನಕ್ಷೆ ತಯಾರಿಸಿ ತಾಂತ್ರಿಕ ಅನುಮೋದನೆ ನೀಡಲು ಕೋರಿರುತ್ತಾರೆ. ಪ್ರಶ್ನಿತ ಜಮೀನಿಗೆ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವ ಅಧಿಕಾರವು ಬೆಂಗಳೂರು ವಿಭಾಗೀಯ ಕಛೇರಿಯ ಕಾರ್ಯವ್ಯಾಪ್ತಿಗೆ ಬರುವುದರಿಂದ ಕರಡು ಏಕ ನಿವೇಶನ ವಿನ್ಯಾಸ ನಕ್ಷೆಯನ್ನು ಸಿದ್ಧಪಡಿಸಿ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ರವರು ಉಲ್ಲೇಖ (4) ರಲ್ಲಿ ಮಾಹಿತಿ/ದಾಖಲೆಗಳೊಂದಿಗೆ ಈ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

. . . .2

ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರು ತಯಾರಿಸಿ ಸಲ್ಲಿಸಿರುವ ಕರಡು ಏಕ ನಿವೇಶನ ವಿನ್ಯಾಸ ನಕ್ಷೆ ಹಾಗೂ ಕಂದಾಯ ಇಲಾಖೆಯಿಂದ ನೀಡಿರುವ ಸರ್ವೆ ನಕ್ಷೆಯನ್ವಯ ಯೋಜನಾತತ್ವಗಳಡಿಯಲ್ಲಿ ವಾಣಿಜ್ಯ (ಸಿಟಿ ಗ್ಯಾಸ್ ಡಿಸ್ಟ್ರಿಬ್ಯೂಷನ್ ಮತ್ತು ಸಿ.ಎನ್.ಜಿ. ಸ್ಟೋರೇಜ್ ಘಟಕ) ಉದ್ದೇಶಕ್ಕಾಗಿ ಏಕ ನಿವೇಶನ ವಾಣಿಜ್ಯ ವಿನ್ಯಾಸ ನಕ್ಷೆಯನ್ನು ಸಿದ್ಧಪಡಿಸಲಾಗಿದೆ.

ಸದರಿ ವಿನ್ಯಾಸದಲ್ಲಿ ವಾಣಿಜ್ಯಕ್ಕಾಗಿ (ಸಿಟಿ ಗ್ಯಾಸ್ ಡಿಸ್ಟ್ರಿಬ್ಯೂಷನ್ ಮತ್ತು ಸಿ.ಎನ್.ಜಿ. ಸ್ಟೋರೇಜ್ ಘಟಕ) **6532.99** ಚ.ಮೀ (**ಶೇ.80.72**), ಉದ್ಯಾನವನಕ್ಕಾಗಿ **818.07** ಚ.ಮೀ (**ಶೇ.10.11**), ವಾಹನ ನಿಲುಗಡೆಗಾಗಿ **462.95** ಚ.ಮೀ (**ಶೇ.5.72**) ಮತ್ತು ರಸ್ತೆಗಾಗಿ **279.59** ಚ.ಮೀ (**ಶೇ.3.45**) ರಷ್ಟು ವಿಸ್ತೀರ್ಣದ ಪ್ರದೇಶವನ್ನು ಕಾಯ್ದಿರಿಸಲಾಗಿದೆ.

**ಸದರಿ ವಿನ್ಯಾಸವನ್ನು ಕಾರ್ಯಗತಗೊಳಿಸುವ ಸಂಬಂಧ ಗ್ರಾಮ ಪಂಚಾಯಿತಿಯು ವಿನ್ಯಾಸ ಅನುಮೋದನೆ ಆದೇಶ ಹೊರಡಿಸಬೇಕಾಗಿದ್ದು, ಉಲ್ಲೇಖ (2) ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರು ಅನುಮೋದಿಸಿರುವ ಕೈಗಾರಿಕೆ ಏಕ ನಿವೇಶನ ವಿನ್ಯಾಸ ನಕ್ಷೆಯನ್ನು ರದ್ದುಪಡಿಸಿ, ಉಲ್ಲೇಖ (5) ರ ಕೈಪಿಡಿಯಲ್ಲಿನ ಮಾರ್ಗಸೂಚಿಗಳನ್ನು ಹಾಗೂ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಅನುಸರಿಸುವ ನಿಬಂಧನೆಗೆ ಒಳಪಟ್ಟು ಕಾರ್ಯರೂಪಕ್ಕೆ ತರಲು ತಾಂತ್ರಿಕ ಅನುಮೋದನೆ ನೀಡಲಾಗಿದೆ.**

1. ವಿನ್ಯಾಸವು ಅನುಮೋದನೆ ದಿನದಿಂದ ಎರಡು ವರ್ಷಗಳ ಅವಧಿಗೆ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸ ಅಭಿವೃದ್ಧಿ ಪೂರ್ಣಗೊಳ್ಳದಿದ್ದಲ್ಲಿ ವಿನ್ಯಾಸದ ಅನುಮತಿಯನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಿಂದ ನವೀಕರಿಸತಕ್ಕದ್ದು.
2. ವಿನ್ಯಾಸ ಕಾರ್ಯಗತಗೊಳಿಸುವ ಮೊದಲು ಸಂಬಂಧಪಟ್ಟ ಗ್ರಾಮ ಪಂಚಾಯಿತಿಯಿಂದ ಅಗತ್ಯ ಅನುಮತಿ ಪಡೆಯಬೇಕು.
3. ಅಭಿವೃದ್ಧಿ ಶುಲ್ಕವನ್ನು ಅಂದಾಜು ಪಟ್ಟಿಯಂತೆ ಹಾಗೂ ಇತರೆ ಶುಲ್ಕಗಳನ್ನು ಕಾನೂನು ಪ್ರಕಾರ ಹಾಗೂ ಸರ್ಕಾರಿ ಆದೇಶಗಳನ್ವಯ ಪಡೆಯತಕ್ಕದ್ದು.
4. ವಾಹನ ನಿಲುಗಡೆಗಾಗಿ ಮತ್ತು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಜಾಗವನ್ನು ಜಮೀನಿನ ಮಾಲೀಕರೇ ಸದರಿ ಉದ್ದೇಶಕ್ಕಾಗಿಯೇ ಕಾಯ್ದಿರಿಸಿ ಅಭಿವೃದ್ಧಿಪಡಿಸಿ ಉಪಯೋಗಿಸಿಕೊಳ್ಳತಕ್ಕದ್ದು. ಹಾಗೂ ಬೇರೆ ಉದ್ದೇಶಕ್ಕಾಗಿ ಈ ಜಾಗವನ್ನು ಉಪಯೋಗಿಸುವಂತಿಲ್ಲ.
5. ಪ್ರಶ್ನಿತ ಜಮೀನಿನ ಮಾಲೀಕರು ಜಮೀನನ್ನು ನಂತರ ವಿಭಜಿಸಲು ಇಚ್ಛಿಸಿದಲ್ಲಿ ನಿಯಮಾವಳಿಯಂತೆ ಈ ಕಚೇರಿಯಿಂದ ತಾಂತ್ರಿಕ ಅನುಮೋದನೆಯನ್ನು ಪೂರ್ವಭಾವಿಯಾಗಿ ಪಡೆಯತಕ್ಕದ್ದು.
6. ಅನುಮೋದಿತ ವಾಣಿಜ್ಯ ಏಕ ನಿವೇಶನ ವಿನ್ಯಾಸದಲ್ಲಿನ ರಸ್ತೆಗಾಗಿ ಕಾಯ್ದಿರಿಸಿರುವ **279.59** ಚ.ಮೀ ಪ್ರದೇಶವನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯು / ಗ್ರಾಮ ಪಂಚಾಯಿತಿಯು ಅರ್ಜಿದಾರರಿಗೆ / ಅಭಿವೃದ್ಧಿದಾರರಿಗೆ **ಯಾವುದೇ ಪರಿಹಾರವನ್ನು ನೀಡದೆ ಪುಕ್ಕಟೆಯಾಗಿ ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪಡೆಯತಕ್ಕದ್ದು.**
7. ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಪೂರ್ವಾನುಮತಿಯಿಲ್ಲದೆ ಏಕ ನಿವೇಶನ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
8. ವಾಣಿಜ್ಯ ಏಕ ನಿವೇಶನ ವಿನ್ಯಾಸ ಪ್ರದೇಶದಲ್ಲಿ ಹಾಲಿ ಇರತಕ್ಕ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು, ಮತ್ತು ರಸ್ತೆಗಳ ಎರಡು ಕಡೆ ಹಾಗೂ ಉದ್ಯಾನವನದಲ್ಲಿ ಹೊಸ ಸಸಿಗಳನ್ನು ಬೆಳೆಸಲು ಸೂಕ್ತ ಕ್ರಮ ಕೈಗೊಳ್ಳಬೇಕು.
9. ಅಭಿವೃದ್ಧಿ ಕಾಮಗಾರಿಗಳು ಮುಗಿದ ನಂತರ ಸಂಬಂಧಪಟ್ಟ ಗ್ರಾಮ ಪಂಚಾಯಿತಿಯಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರ ಪಡೆಯಬೇಕು.
10. ವಾಣಿಜ್ಯ ಏಕ ನಿವೇಶನ ವಿನ್ಯಾಸವನ್ನು ಪೂರ್ಣವಾಗಿ ಅಭಿವೃದ್ಧಿಪಡಿಸಿದ ನಂತರವೇ ಸಂಬಂಧಪಟ್ಟ ಗ್ರಾಮಪಂಚಾಯಿತಿಯಿಂದ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡತಕ್ಕದ್ದು.
11. ಈ ವಾಣಿಜ್ಯ ಏಕನಿವೇಶನ ವಿನ್ಯಾಸದಲ್ಲಿ ಕಟ್ಟಡ ಕಟ್ಟುವ ಮೊದಲು ಸಂಬಂಧಪಟ್ಟ ಗ್ರಾಮ ಪಂಚಾಯಿತಿಯಿಂದ ಅನುಮತಿ ಪತ್ರ ಪಡೆಯತಕ್ಕದ್ದು.
12. ವಾಣಿಜ್ಯ ಏಕ ನಿವೇಶನ ವಿನ್ಯಾಸ ಅಂಗೀಕಾರ ಸಂಬಂಧ ಇತರೆ ಯಾವುದೇ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆಯಬೇಕಾಗಿದ್ದಲ್ಲಿ ಕಡ್ಡಾಯವಾಗಿ ಪಡೆಯತಕ್ಕದ್ದು.

. . . .3

13. ಅನುಮೋದಿತ ವಾಣಿಜ್ಯ ಏಕನಿವೇಶನ ವಿನ್ಯಾಸದ ಸೂಕ್ತ ಸ್ಥಳಗಳಲ್ಲಿ ನೀರು ಇಂಗುಗುಳಿ (Water Recharge) ಮತ್ತು ಮಳೆ ನೀರು ಸಂಗ್ರಹಣೆ (Rain water harvesting pits) ಗಳನ್ನು ನಿರ್ಮಿಸಿ ವಿನ್ಯಾಸದಲ್ಲಿ ಮಳೆ ನೀರು ಸಂಗ್ರಹಣೆ ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
14. ನೈಸರ್ಗಿಕವಾಗಿ ಹರಿಯುವ ನದಿ / ಹಳ್ಳ ಹಾಗೂ ಕೆರೆ ಮುಂತಾದವುಗಳಿಗೆ ವಿನ್ಯಾಸದಲ್ಲಿನ ಯಾವುದೇ ಮಲಿನ ನೀರನ್ನು ಹರಿಯಬಿಡಬಾರದು.
15. ಈ ಅನುಮೋದಿತ ವಸತಿ ಬಡಾವಣೆಯಲ್ಲಿ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾ ಸ್ಥಿತಿಯಂತೆ ಕಾಪಾಡತಕ್ಕದ್ದು. ಹಾಗೂ ಅತಿಕ್ರಮಣ ಮಾಡಬಾರದು ಹಾಗೂ ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.
16. ಅನುಮೋದಿತ ಏಕ ನಿವೇಶನ ವಿನ್ಯಾಸದಲ್ಲಿ **ಕೊಳವೆ ಬಾವಿಯನ್ನು ಕೊರೆಯುವಾಗ** ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆಯತಕ್ಕದ್ದು. ಹಾಗೂ ತೆರೆದ ಕೊಳವೆ ಬಾವಿಯ ಬಗ್ಗೆ ಭೂ ಮಾಲೀಕರುಗಳು ಮತ್ತು ಸ್ಥಳೀಯ ಸಂಸ್ಥೆಗಳು ಸಂರಕ್ಷಣೆ ಮಾಡಲು ದಿನಾಂಕ:31–12–2012 ಮತ್ತು ದಿನಾಂಕ:06–08–2014 ರಂದು ಸರ್ಕಾರವು ನೀಡಿರುವ ನಿರ್ದೇಶನಗಳಂತೆ ತಪ್ಪದೇ ಕ್ರಮವಹಿಸತಕ್ಕದ್ದು.
17. ಈ ಅನುಮೋದಿತ ವಾಣಿಜ್ಯ ಏಕ ನಿವೇಶನ ವಿನ್ಯಾಸ ನಕ್ಷೆಯು ನಿಗಧಿಪಡಿಸಲಾದ ಮಾಪನ (ಸ್ಕೇಲ್) ದಲ್ಲಿ ವ್ಯತ್ಯಾಸ ಇರುವುದು ಕಂಡುಬಂದಲ್ಲಿ ಅದನ್ನು ಸೂಕ್ತವಾಗಿ ಸ್ಥಳದ ವಸ್ತು ಸ್ಥಿತಿ ಹಾಗೂ ಅಳತೆ ಪರಿಮಾಣಕ್ಕೆ ಅನುಗುಣವಾಗಿ ಪರಿಷ್ಕೃತ ವಿನ್ಯಾಸಕ್ಕೆ ಅನುಮೋದನೆ ಪಡೆದುಕೊಳ್ಳತಕ್ಕದ್ದು.
18. ಈ ಅನುಮೋದನೆಯು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸುವುದಕ್ಕೆ ಉಪಯೋಗಿಸಲು ಬರುವುದಿಲ್ಲ.
19. ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಕಛೇರಿಯು ಜವಾಬ್ದಾರಿಯಾಗಿರುವುದಿಲ್ಲ.
20. ಕಂದಾಯ ಇಲಾಖೆಯಿಂದ ನೀಡಿರುವ ದಾಖಲೆ ಮತ್ತು ಸರ್ವೆ ನಕ್ಷೆಯನ್ವಯ ವಿನ್ಯಾಸ ತಯಾರಿಸಲಾಗಿರುತ್ತದೆ.
21. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಯು ತಪ್ಪಾಗಿದ್ದಲ್ಲಿ ವಾಣಿಜ್ಯ (ಸಿಟಿ ಗ್ಯಾಸ್ ಡಿಸ್ಟ್ರಿಬ್ಯೂಷನ್ ಮತ್ತು ಸಿ.ಎನ್.ಜಿ. ಸ್ಟೋರೇಜ್ ಘಟಕ) ಏಕ ನಿವೇಶನ ವಿನ್ಯಾಸಕ್ಕೆ ನೀಡಿರುವ ಅಂಗೀಕಾರ ತಾನೇ ತಾನಾಗಿ ರದ್ದುಗೊಳ್ಳುತ್ತದೆ

29/10/2020

ನಗರ ಮತ್ತು ಗ್ರಾಮಾಂತರ ಯೋಜನಾ
ಜಂಟಿ ನಿರ್ದೇಶಕರು,
ಬೆಂಗಳೂರು ವಿಭಾಗ, ಬೆಂಗಳೂರು.

29/10/2020

ಪ್ರತಿಯನ್ನು :

1. ಮಾನ್ಯ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು ಇವರಿಗೆ ನಕ್ಷೆಯ ಪ್ರತಿಯೊಂದಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರಿಗೆ ನಕ್ಷೆಯ ಪ್ರತಿಯೊಂದಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿ.ಆರ್.ಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯ, ಚಿತ್ರದುರ್ಗ ತಾಲ್ಲೂಕು ಇವರಿಗೆ ತಾಂತ್ರಿಕವಾಗಿ ಅನುಮೋದಿಸಿರುವ ಏಕ ನಿವೇಶನ ವಿನ್ಯಾಸ ನಕ್ಷೆಯ 3 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ ಹಾಗೂ ವಿನ್ಯಾಸಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಕಾಯ್ದೆಯಡಿಯಲ್ಲಿ **ಅನುಮೋದಿಸಿದ ನಂತರ ಒಂದು ಪ್ರತಿಯನ್ನು** (ಆದೇಶದೊಂದಿಗೆ) ನಗರ ಮತ್ತು ಗ್ರಾಮಾಂತರ ಯೋಜನಾ **ಸಹಾಯಕ ನಿರ್ದೇಶಕರ ಕಛೇರಿ, ಚಿತ್ರದುರ್ಗ ಇವರಿಗೆ ಕಳುಹಿಸುವಂತೆ ತಿಳಿಸಿದೆ.**
4. ಅರ್ಜಿದಾರರಾದ Unison Enviro Pvt. Ltd, No. 125A, Raghavendra arcade, 2nd Floor, V.P. Extension, JCR Main Road, Chithradurga Taluk & Disctrict ಇವರ ಮಾಹಿತಿಗಾಗಿ ಕಳುಹಿಸಿದೆ.
5. ವಿನ್ಯಾಸ ಪ್ರತಿಗಳ ಮಾಸ್ಟರ್ ಕಡತಕ್ಕೆ ಮಾಹಿತಿಗಾಗಿ ನಕ್ಷೆಯ ಪ್ರತಿಯೊಂದಿಗೆ ಕಳುಹಿಸಲಾಗಿದೆ.
6. ಕಚೇರಿ ಪ್ರತಿ.